## ಕರ್ನಾಟಕ ಸರ್ಕಾರ

ಸಂ:ಡಿ.ವೈ.ಇ.ಎಸ್/ಕ್ರೀಚಕಪ್ರೋ/69/2025-26

ಆಯುಕ್ತರ ಕಾರ್ಯಾಲಯ
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ
ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ,
ಬೆಂಗಳೂರು-01, ದಿನಾಂಕ: 17-07-2026

## ಸುತ್ತೋಲೆ

ವಿಷಯ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಾರ್ಯಕ್ರಮಗಳಡಿ 2026-27 ನೇ ಸಾಲಿನ ಗುರಿ ಒಲಂಪಿಕ್ ಯೋಜನೆ ಅಡಿ ಅರ್ಜಿಗಳನ್ನು ಆಹ್ವಾನಿಸುವ ಕುರಿತು.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2026-27 ನೇ ಸಾಲಿನ ಕ್ರೀಡಾ ಕಲ್ಯಾಣ ಯೋಜನೆ ಅಡಿಯಲ್ಲಿ ಅಂತರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅದೀಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ ನೀಡಲು 2026-27 ನೇ ಸಾಲಿನ ಗುರಿ ಒಲಂಪಿಕ್ ಯೋಜನೆ ಅಡಿ ಅರ್ಜಿಗಳನ್ನು ಆನ್ ಲೈನ್ ಮೂಲಕ ಆಹ್ವಾನಿಸಲಾಗಿದೆ.

ಅಸಕ್ತ ಕ್ರೀಡಾಪಟುಗಳು ಅರ್ಜಿಗಳನ್ನು ಅಧಿಕೃತ ಜಾಲತಾಣ: https://sevasindu.karnataka.gov.in ಮೂಲಕ ಕಡ್ಡಾಯವಾಗಿ ಆನ್‌ಲೈನ್ ಮೂಲಕ ನಿಗದಿತ ದಿನಾಂಕದೊಳಗೆ ಸಲ್ಲಿಸಲು ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಅಂತಿಮ **ದಿನಾಂಕ:31.07.2026 ರಂದು ಕೊನೆಯ ದಿನಾಂಕವಾಗಿರುತ್ತದೆ,** ಈ ಬಗ್ಗೆ ತಮ್ಮ ಜಿಲ್ಲೆಯಲ್ಲಿ ಹೆಚ್ಚು ಪ್ರಚಾರದಲ್ಲಿರುವ ಸ್ಥಳೀಯ ದಿನ ಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರ ನೀಡಿ ಪತ್ರಿಕಾ ವರದಿ ಪ್ರತಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸಲು ತಿಳಿಸಿದೆ.

**(ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಯುವ ಸಹಾಯವಾಣಿ 155265 ಗೆ ಕಛೇರಿ ಅವಧಿಯಲ್ಲಿ ಸಂಪರ್ಕಿಸಲು ಸೂಚಿಸಿದೆ.**

ಆಯುಕ್ತರು
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಗೆ,

1. ಮಾನ್ಯ ಉಪಾಧ್ಯಕ್ಷರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಕಂಠೀರವ ಕ್ರೀಡಾಂಗಣ.
2. ಮಹಾನಿರ್ದೇಶಕರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಬೆಂಗಳೂರು.
3. ಅಧ್ಯಕ್ಷರು, ಕರ್ನಾಟಕ ಒಲಂಪಿಕ್ ಸಂಸ್ಥೆ, ಬೆಂಗಳೂರು.
4. ಎಲ್ಲಾ ಜಿಲ್ಲೆಗಳ ಉಪ/ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
5. ರಾಜ್ಯದ ಎಲ್ಲಾ ಕ್ರೀಡಾ ಸಂಸ್ಥೆಗಳ ಅಧ್ಯಕ್ಷರು/ಕಾರ್ಯದರ್ಶಿಗಳು.
6. ಹೆಚ್ಚುವರಿ ಪ್ರತಿ.

# ಗುರಿ ಒಲಂಪಿಕ್ ಪದಕ ಯೋಜನೆಯ ಅನುಷ್ಠಾನ ಮಾರ್ಗಸೂಚಿಗಳು.

ಆಸಕ್ತ ಕ್ರೀಡಾಪಟುಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಮೂಲಕ ಹಾಗೂ ಮಾನ್ಯತೆ ಪಡೆದ ರಾಜ್ಯ ಕ್ರೀಡಾ ಸಂಸ್ಥೆಗಳ ಲಿಖಿತ ಶಿಫಾರಸ್ಸುಗಳ ಮೂಲಕ ಪ್ರತಿಭಾವಂತ ಹಾಗೂ 2028 ರ ಬೇಸಿಗೆ ಒಲಂಪಿಕ್ಸ್/ಪ್ಯಾರಾಲಿಂಪಿಕ್ಸ್‌ನಲ್ಲಿ ಭಾಗವಹಿಸಲು ಅರ್ಹತೆ ಪಡೆದು, ಪದಕ ಗೆಲ್ಲುವ ಸಂಭಾವ್ಯ ಕ್ರೀಡಾಪಟುಗಳನ್ನು ಗುರುತಿಸಿ, ಅವರಲ್ಲಿ 60 ಅತ್ಯಂತ ಅರ್ಹ ಕ್ರೀಡಾಪಟುಗಳಿಗೆ ಅಗತ್ಯ ಪ್ರೋತ್ಸಾಹ ನೀಡುವ ಮೂಲಕ ಮುಂದಿನ ಒಲಂಪಿಕ್ಸ್‌ನಲ್ಲಿ ಪದಕ ಸಾಧನೆ ದಾಖಲಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿರುತ್ತದೆ.

- ಅರ್ಹ ಕ್ರೀಡಾಪಟುಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಮೂಲಕ ಆಯ್ಕೆ ಪ್ರಕ್ರಿಯೆ ಕೈಗೊಳ್ಳಲಾಗುವುದು.
- 2028 ರ ಒಲಂಪಿಕ್ಸ್/ಪ್ಯಾರಾಲಿಂಪಿಕ್ಸ್‌ನಲ್ಲಿ ಸ್ಪರ್ಧೆಯಾಗಿರುವ ಕ್ರೀಡೆಗಳ ಸಂಬಂಧಿಸಿದಂತೆ ಮಾತ್ರ ಕ್ರೀಡಾಪಟುಗಳನ್ನು ಆಯ್ಕೆ ಮಾಡಲಾಗುವುದು.
- ಕೆಳಕಾಣಿಸಿದ ಕ್ರೀಡಾ ಸಾಧಕರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುವರು.
  A. ವಿಶ್ವ ಚಾಂಪಿಯನ್‌ಷಿಪ್ (World Championship) ಅಥವಾ ಈ ಹಿಂದಿನ ಒಲಂಪಿಕ್ಸ್‌ನಲ್ಲಿ ಪದಕ ವಿಜೇತರು/ಭಾಗವಹಿಸಿದ ಕ್ರೀಡಾಪಟುಗಳು.
  B. ಈ ಹಿಂದಿನ 02 ಏಷ್ಯನ್ ಗೇಮ್ಸ್ (Asian Games) ಹಾಗೂ ಕಾಮನ್‌ವೆಲ್ತ್ ಗೇಮ್ಸ್ (Commonwealth Games) ಗಳಲ್ಲಿ ಪದಕ ಪಡೆದ ಹಾಗೂ ಭಾಗವಹಿಸಿದ ಕ್ರೀಡಾಪಟುಗಳು.
  C. ಕಳೆದ 04 ವರ್ಷಗಳ (2022, 2023, 2024 ಮತ್ತು 2025) ಮತ್ತು ಪ್ರಸ್ತುತ ವರ್ಷದಲ್ಲಿ ಹಿರಿಯರ ಮತ್ತು ಕಿರಿಯರ ವಿಭಾಗದ (Senior and Junior) ಏಷ್ಯನ್ ಚಾಂಪಿಯನ್‌ಷಿಪ್ (Asian Championship) ಪದಕ ವಿಜೇತರು ಮತ್ತು ಭಾಗವಹಿಸಿದ ಕ್ರೀಡಾಪಟುಗಳು.
  D. ಕಳೆದ 03 ವರ್ಷಗಳಲ್ಲಿ (2023, 2024 ಮತ್ತು 2025) ಮತ್ತು ಪ್ರಸ್ತುತ ವರ್ಷದಲ್ಲಿ ಹಿರಿಯರ ರಾಷ್ಟ್ರೀಯ ಚಾಂಪಿಯನ್‌ಷಿಪ್ (Senior National Championship) ಅಥವಾ ಕಿರಿಯರ ರಾಷ್ಟ್ರೀಯ ಚಾಂಪಿಯನ್‌ಷಿಪ್ (Junior National Championship) ಗಳಲ್ಲಿ ಪದಕ ಪಡೆದ ಕ್ರೀಡಾಪಟುಗಳು.
  E. ಗುಂಪು ಕ್ರೀಡೆಗಳಲ್ಲಿ ಕಳೆದ 03 ವರ್ಷಗಳಲ್ಲಿ (2023, 2024 ಮತ್ತು 2025) ಮತ್ತು ಪ್ರಸ್ತುತ ವರ್ಷದಲ್ಲಿ ರಾಷ್ಟ್ರೀಯ ತರಬೇತಿ ಶಿಬಿರ (National Camp) ಗಳಲ್ಲಿ ಪಾಲ್ಗೊಂಡಿರುವ ಕ್ರೀಡಾಪಟುಗಳು.
  F. ಹಿರಿಯರ ಮತ್ತು ಕಿರಿಯರ ರಾಷ್ಟ್ರೀಯ ಚಾಂಪಿಯನ್‌ಷಿಪ್‌ಗಳಲ್ಲಿ ಕನಿಷ್ಟ ಮೂರು ವರ್ಷ ಕರ್ನಾಟಕವನ್ನು ಪ್ರತಿನಿಧಿಸಿದ ಕ್ರೀಡಾಪಟುಗಳು ಅಥವಾ ಅಂತರ-ರಾಷ್ಟ್ರೀಯ ಕ್ರೀಡಾಪಟುಗಳಾದಲ್ಲಿ ಕನಿಷ್ಟ ಒಂದು ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿದ ಕ್ರೀಡಾಪಟುಗಳು ಮಾತ್ರ ಈ ಯೋಜನೆಯಡಿ ಸೌಲಭ್ಯಗಳನ್ನು ಪಡೆಯಲು ಅರ್ಹರಾಗಿರುವರು.

'**ಗುರಿ-ಒಲಿಂಪಿಕ್ ಪದಕ ಯೋಜನೆ**'ಯಡಿ ನೀಡಲಾಗುವ ಪ್ರೋತ್ಸಾಹಧನವನ್ನು ಆಯ್ಕೆಯಾದ ಕ್ರೀಡಾಪಟುಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುವುದು. ಸದರಿ ಮೊತ್ತವನ್ನು ಕ್ರೀಡಾಪಟುಗಳು ಕೆಳಕಾಣಿಸಿದ ಯಾವುದೇ ಉದ್ದೇಶಕ್ಕೆ ಬಳಕೆ ಮಾಡಿಕೊಳ್ಳಬಹುದಾಗಿದೆ.

1) ಕ್ರೀಡಾ ತರಬೇತಿ
2) ಕ್ರೀಡಾ ವಿಜ್ಞಾನ ಬೆಂಬಲ
3) ಪೌಷ್ಠಿಕ ಆಹಾರ (Supplements)
4) ಕ್ರೀಡಾ ಕಿಟ್
5) ಕ್ರೀಡಾ ಸಾಮಗ್ರಿ
6) ರಾಷ್ಟ್ರೀಯ ಮತ್ತು ಅಂತರ-ರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಭಾಗವಹಿಸಲು.

ಆಯುಕ್ತರು
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ